ಅನುಬಂಧ–1

4. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರ ಪರವಾಗಿ)

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಕಲಂ 89ರ ಮೇರೆಗೆ:

1. ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ 2003ರ (2004 ಕರ್ನಾಟಕ ಅಧಿನಿಯಮ 32) 88ನೇ ಪ್ರಕರಣದ ಮೂಲಕ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ನಿಯಮಗಳು 2005ಕ್ಕೆ ನಿಯಮ 3, 4, 9, 15, 33, 37, 38, 43, 47, 50, 125, 127, 128, 130, 138, 139, 140, 153, 159 ನಿಯಮಗಳಿಗೆ ತಿದ್ದುಪಡಿ ಹಾಗೂ ಹೊಸ 130ಬಿ ಮತ್ತು 164ರ ನಿಯಮ ಸೇರ್ಪಡೆ ಹಾಗೂ ನಮೂನೆ ವ್ಯಾಟ್ 1ರ ಪ್ರತ್ಯಾಯೋಜನೆ ಮಾಡಿ ದಿನಾಂಕ 22ನೇ ಜುಲೈ, 2010ರಂದು ಹೊರಡಿಸಲಾದ ಎಫ್‌ಡಿ 236 ಸಿಎಸ್‌ಎಲ್ 2009, ಅಧಿಸೂಚನೆಯನ್ನು ಮಂಡಿಸುತ್ತೇನೆ.

1979ರ ಕರ್ನಾಟಕ ಸರಕುಗಳು ಪ್ರವೇಶ ತೆರಿಗೆ ಕಾಯ್ದೆ 31ರ ಪ್ರಕರಣದ ಮೇರೆಗೆ:

2) ಕರ್ನಾಟಕ ಸರಕುಗಳ ಪ್ರವೇಶದ ಮೇಲೆ ತೆರಿಗೆ ಅಧಿನಿಯಮ 79 (1979ರ ಕರ್ನಾಟಕ ಅಧಿನಿಯಮ 27)ರ 11ಎ ಪ್ರಕರಣದಿಂದ ಪ್ರದತ್ತವಾದ ಅಧಿಕಾರವನ್ನು ಬಳಸಿ ಸರ್ಕಾರಿ ಆದೇಶ ಸಂಖ್ಯೆ: ಇಎನ್/ಎನ್‌ಸಿಇ/2008 ದಿನಾಂಕ 19–1–2010ರ ನಿಬಂಧನೆಗಳಿಗನುಸಾರವಾಗಿ ವಿದ್ಯುತ್ ಸಹ ಉತ್ಪಾದನಾ ಯೋಜನೆಯೂ ಒಳಗೊಂಡಂತೆ ನವೀಕರಿಸಬಹುದಾದ ಇಂಧನ ಯೋಜನೆಯೊಂದನ್ನು ಸ್ಥಾಪಿಸುವಾಗ ಬಳಸುವ ಬಂಧಕ ವಿದ್ಯುತ್ ಉತ್ಪಾದನಾ ಸ್ಥಾವರವನ್ನು ಸ್ಥಾಪಿಸುವ ಉದ್ದೇಶದಿಂದ ತರಿಸಿಕೊಂಡ ಸ್ಥಿರ ಯಂತ್ರ ಮತ್ತು ಯಂತ್ರೋಪಕರಣ ಹಾಗೂ ಬಂಡವಾಳ ಸರಕುಗಳ ಮೇಲೆ ಮತ್ತು ಹೂಡುವಳಿ ವಸ್ತುಗಳಾಗಿ, ಘಟಕ ಭಾಗಗಳಾಗಿ ಮತ್ತು ಬಳಕೆ ವಸ್ತುಗಳಾಗಿ ಆ ಯೋಜನೆಯು ಪ್ರಾರಂಭಗೊಂಡ ಮೂರು ಮತ್ತು ಐದು ವರ್ಷಗಳವರೆಗೆ ಸಾರ್ವಜನಿಕ ಹಿತದೃಷ್ಟಿಯಿಂದ ದಿನಾಂಕ 19–1–2010ರಿಂದ ಜಾರಿಗೆ ಬರುವಂತೆ ಪ್ರವೇಶ ತೆರಿಗೆಯಿಂದ ವಿನಾಯಿತಿಗೊಳಿಸುವುದಕ್ಕಾಗಿ ಹೊರಡಿಸಲಾದ ಆಇ/10/ಸಿಇಟಿ/ 2010, ದಿನಾಂಕ 18–12–2010ರ ಅಧಿಸೂಚನೆಯನ್ನು ಮಂಡಿಸುತ್ತೇನೆ.

1978ರ ಕರ್ನಾಟಕ ರಾಜ್ಯ ನಾಗರೀಕ ಸಿವಿಲ್ ಸೇವಾ ಅಧಿನಿಯಮ ಕಲಂ 8ರ ಉಪ ಕಲಂ 3ರನ್ವಯ:

3. ಕರ್ನಾಟಕ ಸಿವಿಲ್ ಸೇವೆಗಳು (ಸೇವೆಗಳು ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳು, 1974ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 1978, (1990ರ ಅಧಿನಿಯಮ ಸಂಖ್ಯೆ 14)ರ 3ನೇ ಪ್ರಕರಣ 2ಎ ಉಪ ಪ್ರಕರಣವನ್ನು ಪ್ರಕರಣ 8ರೊಂದಿಗೆ ನಿಯಮ 5ಕ್ಕೆ ತಿದ್ದುಪಡಿ ಮಾಡಿ ಓದಿಕೊಂಡಂತೆ ಕರ್ನಾಟಕ ಸಿವಿಲ್ ಸೇವೆಗಳು (ಸೇವೆಗಳು ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮಗಳೂ 1974ರ ನಿಯ 5ರ ಉಪ ನಿಯಮ 1ರ ಉಪ ಖಂಡ (ii) ಐಟಂ ಎ.ಬಿ.ರಲ್ಲಿರುವ ನಮೂದಿನ ನಂತರ "(ಎ.ಸಿ.) ಕರ್ನಾಟಕ ಸಿವಿಲ್ ಸೇವೆ ನಿಯಮಗಳು 2006ರಲ್ಲಿ ನಿಗದಿಪಡಿಸಿರುವಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇಮಕಾತಿಗೆ ಆಯ್ಕೆ ಪರೀಕ್ಷೆಯ ಒಂದು ಭಾಗವಾಗಿ ಲೋಸೇವಾ ಆಯೋಗ ಅಥವಾ ಇತರ ಯಾವುದೇ ಆಯ್ಕೆ ಪ್ರಾಧಿಕಾರ ನಡೆಸುವ ಕನ್ನಡ ಭಾಷಾ ಪರೀಕ್ಷೆಯನ್ನು ಸೇರಿಸತಕ್ಕದ್ದು." ಎಂದು ಹೊರಡಿಸಲಾದ ದಿನಾಂಕ 2-2-2011ರ ಸಂಖ್ಯೆ ಸಿಆಸುಇ 3 ಎಸ್ಎಸ್ಆರ್, 2010 ಅಧಿಸೂಚನೆಗಳನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರ ಪರವಾಗಿ)

1985ರ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಅಧಿನಿಯಮದ, 13ರ ಪ್ರಕರಣದ ಮೇರೆಗೆ:

1. ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ 2009-10ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(7)ರ ಪ್ರಕರಣದ ಮೇರೆಗೆ:

1. ಕೆ. ಮುರಳೀಧರನ್, ತಹಸೀಲ್ದಾರ್, ಉಡುಪಿ ತಾಲ್ಲೂಕು ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸಿ ಹೊರಡಿಸಿರುವ ಆದೇಶವನ್ನು ಸದನದಲ್ಲಿ ಮಂಡಿಸುತ್ತೇನೆ.

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಗಳ ಅಧಿನಿಯಮ 1951ರ ಪರಿಚ್ಛೇದ 37(7)ರ ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ 2009–10ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

1956ರ ಕಂಪನಿ ಅಧಿನಿಯಮದ 619(3) ಪ್ರಕರಣದ ಮೇರೆಗೆ:

1. ಮೈಸೂರು ಮಿನರಲ್ಸ್ ಲಿಮಿಟೆಡ್‌ನ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು)

ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಮುಜರಾಯಿ ಸಚಿವರ ಪರವಾಗಿ)

2000ದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮದ ಕಲಂ 47(4)ರ ಹಾಗೂ 50(2)ರ ಮೇರೆಗೆ:

1. ಬೆಂಗಳೂರು ವಿಶ್ವವಿದ್ಯಾಲಯದ 2007–08ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

2. ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ ಇದರ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು)

1993 ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ 262(3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ:

1. ತುಮಕೂರು ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

2. ಕೋಲಾರ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

3. ಹಾವೇರಿ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

4. ಕೊಡಗು ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ವಾರ್ಷಿಕ ಆಡಳಿತ ವರದಿ.

5. ಹಾಸನ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

6. ಕೊಪ್ಪಳ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

7. ಉತ್ತರ ಕನ್ನಡ ಜಿಲ್ಲಾ ಪಂಚಾಯತ್‌ನ 2007–08 ಮತ್ತು 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

8. ಧಾರವಾಡ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿ.

9. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಮತ್ತು 2009–10ನೇ ಸಾಲಿನ ವಾರ್ಷಿಕ ಆಡಳಿತ ವರದಿ.

10. ಗದಗ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಮತ್ತು 2009–10ನೇ ಸಾಲಿನ ವಾರ್ಷಿಕ ಆಡಳಿತ ವರದಿ.

11. ಚಿತ್ರದುರ್ಗ ಜಿಲ್ಲಾ ಪಂಚಾಯತ್‌ನ 2009–10ನೇ ಸಾಲಿನ ವಾರ್ಷಿಕ ಆಡಳಿತ ವರದಿ.

12. ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

13. ಮಂಡ್ಯ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

14. ಬೀದರ್ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

15. ಬಳ್ಳಾರಿ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಮತ್ತು 2009–10ನೇ ಸಾಲಿನ ವಾರ್ಷಿಕ ಆಡಳಿತ ವರದಿ.

16. ಮೈಸೂರು ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

17. ಚಿಕ್ಕಮಗಳೂರು ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

18. ಉಡುಪಿ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಮುರುಗೇಶ್ ರುದ್ರಪ್ಪ ನಿರಾಣಿ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು)

1956ರ ಕಂಪನಿ ಅಧಿನಿಯಮದ 619(ಎ) (2) ಪ್ರಕರಣದ ಮೇರೆಗೆ:

1. ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತದ 2009–10ನೇ ಸಾಲಿನ ವಾರ್ಷಿಕ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರ ಪರವಾಗಿ:

1950ರ ರಸ್ತೆ ಸಾರಿಗೆ ಸಂಸ್ಥೆ ಅಧಿನಿಯಮದ (ಕೇಂದ್ರ) ಕಲಂ 35(2)ರ ಹಾಗೂ 33(4)ರ ಪ್ರಕರಣದ ಮೇರೆಗೆ:

1. ಈಶಾನ್ಯ ಕರ್ನಾಟಕ ಸಾರಿಗೆ ಸಂಸ್ಥೆ, ಗುಲ್ಬರ್ಗಾ ಇದರ 2009–10ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರ ಪರವಾಗಿ

1995ರ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧಿನಿಯಮ ಅಧ್ಯಾಯ 4, ನಿಯಮ 15ರ ಮೇರೆಗೆ:

1. ಕರ್ನಾಟಕ ರಾಜ್ಯ ಮಹಿಳಾ ಆಯೋಗದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರ ಪರವಾಗಿ

1963ರ ಕೃಷಿ ವಿಶ್ವವಿದ್ಯಾನಿಲಯ ಅಧಿನಿಯಮ ಕಲಂ 38(3)ರ ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣ ಹಾಗೂ ರಫ್ತು ನಿಗಮ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.

2. ಕರ್ನಾಟಕ ಆಗ್ರೋ ಇಂಡಿಸ್ಟ್ರೀಸ್ ಕಾರ್ಪೊರೇಷನ್ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.

3. ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.

4. ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ ನಿಯಮಿತದ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಸಿ.ಹೆಚ್. ವಿಜಯಶಂಕರ್ (ಅರಣ್ಯ ಮತ್ತು ಸಣ್ಣ ಕೈಗಾರಿಕೆ ಸಚಿವರು)

1956ರ ಕಂಪನಿ ಅಧಿನಿಯಮದ 619(ಎ)(2) ಪ್ರಕರಣದ ಮೇರೆಗೆ:

1. ಕರ್ನಾಟಕ ಪಲ್ಪ್‌ವುಡ್ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.

2. ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು) (ಇಂಧನ ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಪರವಾಗಿ:

1996ರ ಕಂಪನಿಗಳ ಅಧಿನಿಯಮದ 619(ಎ)(4)ನೇ ಪ್ರಕರಣದ ಮೇರೆಗೆ:

1. ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.

2. ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್‌ನ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.

3. ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು) (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನ ಸೇವಾ ಸಚಿವರ ಪರವಾಗಿ):

1956ರ ಕಂಪನಿಗಳ ಅಧಿನಿಯಮದ 619(4)ನೇ ಪ್ರಕರಣದ ಮೇರೆಗೆ:

1. ಬೆಂಗಳೂರು ವಿಮಾನ ನಿಲ್ದಾಣ ರೈಲು ಸಂಪರ್ಕ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು):

1956ರ ಕಂಪನಿ ಅಧಿನಿಯಮದ 619(ಎ)(4) ಪ್ರಕರಣದ ಮೇರೆಗೆ:

1. ಕಾವೇರಿ ನೀರಾವರಿ ನಿಗಮ ನಿಯಮಿತದ 2009–10ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು) (ಸಕ್ಕರೆ ಮತ್ತು ತೋಟಗಾರಿಕೆ ಸಚಿವರ ಪರವಾಗಿ):

2010ರ ಕರ್ನಾಟಕ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಅಧಿನಿಯಮ ಕಲಂ 57ರ ಪ್ರಕರಣದ ಮೇರೆಗೆ:

1. ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ ಇದರ 2009–10ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಶ್ರೀ ಸಿದ್ದರಾಮಯ್ಯ (ವಿರೋಧ ಪಕ್ಷದ ನಾಯಕರು): ಮಾನ್ಯ ಕಾರಜೋಳರವರೇ, ಎಲ್ಲರ ವಕಾಲತ್ತನ್ನು ನೀವೇ ತೆಗೆದುಕೊಂಡಿದ್ದೀರಾ? ಇಲ್ಲಿ ಮಿನಿಸ್ಟರ್‌ಗಳು ಬರುವುದಿಲ್ಲವೇ? ಎಲ್ಲಿ ಹೋಗಿದ್ದಾರೆ? ಗೊತ್ತಾಗಬೇಕಲ್ಲವೇ? ಎಲ್ಲಾ ಮಂತ್ರಿಗಳು ಅವರ ಕಾಗದಪತ್ರಗಳನ್ನು ಮಂಡಿಸುವುದಕ್ಕೆ ಕೂಡ ಅವರು ಇರುವುದಿಲ್ಲವೆಂದರೆ ಎಲ್ಲಿ ಹೋಗಿದ್ದಾರೆ?

ಅಧ್ಯಕ್ಷರು: ಮಾನ್ಯ ಉಮೇಶ್ ಕತ್ತಿಯವರು ಹಾಗೂ ಸಿ.ಸಿ.ಪಾಟೀಲ್‌ರವರು ಪತ್ರ ಬರೆದಿದ್ದಾರೆ.

ಶ್ರೀ ಸಿದ್ದರಾಮಯ್ಯ: ಕಾರಜೋಳರವರೇ, ನೀವು ಒಬ್ಬರೇನಾ? ಎಲ್ಲಾ ಎಲ್ಲಿ ಹೋಗಿದ್ದಾರೆ?

(ಗೊಂದಲ)

ಶ್ರೀ ಎಂ. ಗೋವಿಂದ ಕಾರಜೋಳ: ಸರ್, ಪತ್ರ ಬರೆದು ಅನುಮತಿ ತೆಗೆದುಕೊಂಡು ಆ ಮನೆಗೆ ಹೋಗಿದ್ದಾರೆ.

ಶ್ರೀ ಸಿದ್ದರಾಮಯ್ಯ: ಮಾನ್ಯ ಯಡಿಯೂರಪ್ಪನವರನ್ನು ತೆಗೆದು ಹಾಕಿ ನೀವೇ ಯಾರಾದರೂ ಆಗಿರಿ.

ಶ್ರೀ ಗೋವಿಂದ ಎಂ. ಕಾರಜೋಳ: ಕೆಲವರು ಆ ಮನೆಗೆ ಹೋಗಿದ್ದಾರೆ. ಮತ್ತೆ ಮಾನ್ಯ ಉಮೇಶ್ ಕತ್ತಿಯವರಿಗೆ ಬೇರೆ ಜವಾಬ್ದಾರಿ ಕೊಟ್ಟಿದ್ದಾರೆ.

ಅಧ್ಯಕ್ಷರು: ಅವರು ಅನುಮತಿ ಕೇಳಿದ್ದಾರೆ.

5. ಮಾನ್ಯ ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು:

ಅ) ವಿಷಯ: ಕರ್ನಾಟಕ ಲೋಕಸೇವಾ ಆಯೋಗದವರು ಪ್ರಥಮ ದರ್ಜೆ ಹಾಗೂ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಅನ್-ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಸೂಚಿಸಿದ್ದು, ಇದರಿಂದ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ತೊಂದರೆ ಆಗುತ್ತಿರುವ ಬಗ್ಗೆ

ಶ್ರೀ ಎಂ.ಟಿ. ಕೃಷ್ಣಪ್ಪ (ತುರುವೇಕೆರೆ): Karnataka Public Service Commission ನಿಂದ ಸುಮಾರು 758 ಎರಡನೇ ದರ್ಜೆಯ ಗುಮಾಸ್ತರು ಹಾಗೂ ಪ್ರಥಮ ದರ್ಜೆಯ ಗುಮಾಸ್ತರ ಹುದ್ದೆಗಳಿಗೆ call ಮಾಡಿದ್ದಾರೆ. 10ನೇ ತಾರೀಖು last date ಎಂದು ಹೇಳಿದ್ದಾರೆ. ಪ್ರತಿಯೊಂದು ಅರ್ಜಿಯನ್ನೂ ಕೂಡ on-line ನಲ್ಲಿ ಕೊಡಬೇಕೆಂದು ಆದೇಶ ಮಾಡಿದ್ದಾರೆ. ಹಳ್ಳಿಯಲ್ಲಿರತಕ್ಕಂತಹ ಮಕ್ಕಳಿಗೆ ಇದರಿಂದ ತುಂಬಾ ತೊಂದರೆಯಾಗುತ್ತಿದೆ. ಬಹುತೇಕ ಹಳ್ಳಿಗಳಲ್ಲಿ ಕರೆಂಟ್ ಇರುವುದಿಲ್ಲ, on-line ವ್ಯವಸ್ಥೆ ಕೂಡ ಇರುವುದಿಲ್ಲ. ಹಾಗಾಗಿ ಈ ಪದ್ಧತಿ ಜೊತೆಗೆ ನೇರವಾಗಿ ಟಪಾಲ್ ಮೂಲಕ ಅರ್ಜಿ ಸಲ್ಲಿಸುವಂತಹ ಅವಕಾಶ ಮಾಡಿಕೊಡಬೇಕು ಅಥವಾ ನೇರವಾಗಿ ಅರ್ಜಿಯನ್ನು ತಂದುಕೊಟ್ಟರೂ ಸಹ ಅರ್ಜಿ ಸ್ವೀಕಾರ ಮಾಡುವುದಕ್ಕೆ ಅವಕಾಶ ಮಾಡಿಕೊಟ್ಟರೆ ಬಹುಶ: ಹಳ್ಳಿ ಮಕ್ಕಳಿಗೆ ಅನುಕೂಲವಾಗುತ್ತದೆ. ಕರೆಂಟ್ ಇಲ್ಲದೇ on-lineನಲ್ಲಿ operate ಮಾಡುವುದು